**AUGUST 23, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಮರು ಮಂಡನೆಯಾದ ಕರ್ನಾಟಕ ಸೌಹಾರ್ದ ಸಹಕಾರಿ ತಿದ್ದುಪಡಿ ಮಸೂದೆ 2025 ಗೆ ವಿಧಾನ ಪರಿ ‘ತ್ ಅಂಗೀಕಾರ.**

- **ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಬಾಗಲಕೋಟೆ ಜಿಲ್ಲಾಧಿಕಾರಿ, ಎಸ್‌ಪಿ ಕಚೇರಿಯಲ್ಲಿ ಕಾನೂನು ಸಲಹಾ ಕೇಂದ್ರ ಸ್ಥಾಪನೆ.**

- **ಧಾರವಾಡದ ಪಂಡಿತ್ ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಕೊಡಮಾಡುವ ‘ರಾಷ್ಟ್ರೀಯ ಪ್ರಶಸ್ತಿ’ಗೆ ಪುಣೆಯ ಪಂಡಿತ್ ಸುಹಾಸ ವ್ಯಾಸ ಭಾಜನ.**

- **ರಾಜ್ಯದ ವಿವಿಧೆಡೆ ಮುಂದುವರಿದ ಆರ್ಥಿಕ ಸೇರ್ಪಡೆ ಅಭಿಯಾನ: ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಜಾಗೃತಿ**

**ಈಗ ವಾರ್ತೆಗಳ ವಿವರ**

*******

**ಮುಂಗಾರು ಅಧಿವೇಶನದ ಕೊನೆಯ ದಿನವಾದ ನಿನ್ನೆ ಸರ್ಕಾರ ಪುನಃ ಮಂಡಿಸಿದ್ದ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ಮಸೂದೆ 2025 ವಿಧಾನ ಪರಿ ‘ತ್ತಿನಲ್ಲಿ ಅಂಗೀಕೃತಗೊಂಡಿದೆ. ಎರಡು ದಿನಗಳ ಹಿಂದೆ, ಈ ಮಸೂದೆ ಪರಿ ‘ತ್ತಿನಲ್ಲಿ ಮೂರು ಮತಗಳ ಅಂತರದಿಂದ ತಿರಸ್ಕೃತವಾಗಿತ್ತು. 23 ಸದಸ್ಯರು ಮಸೂದೆಗೆ ಬೆಂಬಲ ನೀಡಿದ್ದರೆ, ಬಿಜೆಪಿ–ಜೆಡಿಎಸ್ ಒಕ್ಕೂಟದ 26 ಸದಸ್ಯರು ವಿರೋಧಿಸಿದ್ದರು. ಕಾನೂನು ಸಚಿವ ಹೆಚ್.ಕೆ.ಪಾಟೀಲ್ ನಿನ್ನೆ ಮಸೂದೆಯನ್ನು ಪುನಃ ಮಂಡಿಸಿದ್ದು, ಬಹುಮತದಿಂದ ಅಂಗೀಕಾರವಾಗಿದೆ. ಮಸೂದೆ ಕುರಿತು ಮಾತನಾಡಿದ ಸಚಿವ ಹೆಚ್.ಕೆ. ಪಾಟೀಲ್ ಅವರು, ಈ ಕ್ರಮವು ಸೌಹಾರ್ದ ಸಹಕಾರಿ ಮಂಡಳಿಗಳಲ್ಲಿ ಪಾರದರ್ಶಕತೆ ಹಾಗೂ ಹೊಣೆಗಾರಿಕೆ ಹೆಚ್ಚಿಸಲು ನೆರವಾಗಲಿದೆ ಎಂದು ಹೇಳಿದರು.**

*******

ರಾಯಲ್ ರೀಜನಲ್ ಟೂರಿಸಂ ಪ್ರಾಧಿಕಾರ ರಚನೆ ಸಂಬಂಧ, ರಾಜ್ಯ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಲಿದೆ ಎಂದು ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ, ಹೇಳಿದ್ದಾರೆ. ವಿಧಾನಪರಿ ತ್ತಿನಲ್ಲಿ ನಿನ್ನೆ ಕರ್ನಾಟಕ ಪ್ರವಾಸೋದ್ಯಮ, ವ್ಯಾಪಾರ ಸೌಲಭ್ಯ ನಿಯಂತ್ರಣ ತಿದ್ದುಪಡಿ ವಿಧೇಯಕ ಚರ್ಚೆಯಲ್ಲಿ ಪಾಲ್ಗೊಂಡು ಈ ಭರವಸೆ ನೀಡಿದರು. ಹೇಮಲತಾ ನಾಯಕ್ ಅವರ ಪ್ರಸ್ತಾಪಕ್ಕೆ ಉತ್ತರಿಸಿ, ಯಲ್ಲಮ್ಮನಗುಡ್ಡದ ಸಮಗ್ರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ 230 ಕೋಟಿ ರೂಪಾಯಿ ಮೀಸಲಿರಿಸಿದೆ ಎಂದ ಅವರು, ಪಿ.ಎಚ್.ಪೂಜಾರ ಆಗ್ರಹಕ್ಕೆ ಪ್ರತಿಕ್ರಿಯಿಸಿ, ಅಂಜನಾದ್ರಿ ಬೆಟ್ಟದಲ್ಲಿ ರೋಪ್ ವೇ, ಕೇಬಲ್ ಕಾರು ಅಳವಡಿಕೆ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿದ್ದು, ಡಿಸೆಂಬರ್ ವೇಳೆಗೆ ಕಾಮಗಾರಿ ಆರಂಭವಾಗುವ ನಿರೀಕ್ಷೆಯಿದೆ ಎಂದು ತಿಳಿಸಿದರು.

*******

ರಾಜ್ಯದಲ್ಲಿಯೇ ಪ್ರಥಮ ಬಾರಿ ಬಾಗಲಕೋಟೆ ಜಿಲ್ಲಾಧಿಕಾರಿ ಕಚೇರಿ ಹಾಗೂ ಜಿಲ್ಲಾ ಪೊಲೀಸ್ ವರಿ ಾಧಿಕಾರಿ ಕಚೇರಿಯಲ್ಲಿ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಕಾನೂನು ಸೇವಾ ಕೇಂದ್ರಗಳಿಗೆ ಚಾಲನೆ ನೀಡಿ ಮಾತನಾಡಿದ ಪ್ರಧಾನ ಜಿಲ್ಲಾ ನ್ಯಾಯಾಧೀಶರಾದ ಎಸ್.ವಿ.ವಿಜಯ್, ಸಾರ್ವಜನಿಕರಿಗೆ ಉಚಿತ ಕಾನೂನು ಸಲಹೆ ಮತ್ತು ಸೇವೆಗಳನ್ನು ಕಾನೂನು ಸಲಹೆಗಾರರಿಂದ ಒದಗಿಸುವ ಸಲುವಾಗಿ ಕಾನೂನು ಸಲಹಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಕೆಲಸದ ನಿಮಿತ್ತ ಜಿಲ್ಲಾಡಳಿತ ಭವನಕ್ಕೆ ಸಾರ್ವಜನಿಕರು, ವೃದ್ಧರು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಅವರಿಗೆ ಅನುಕೂಲತೆ ಕಲ್ಪಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

*******

ಶ್ರೀ ಕ್ಷೇತ್ರ ಧರ್ಮಸ್ಥಳದ ವಿರುದ್ಧ ನಡೆಯುತ್ತಿರುವ ಅಪಪ್ರಚಾರ ಖಂಡಿಸಿ ರಾಜ್ಯದ ವಿವಿಧೆಡೆ ಪ್ರತಿಭಟನೆ ನಡೆಸಲಾಯಿತು. ಹಿಂದೂಪರ ಸಂಘಟನೆಗಳು ಕರೆ ನೀಡಿದ್ದ ಮಂಡ್ಯ ಜಿಲ್ಲೆಯ ಮದ್ದೂರು ನಗರ ಬಂದ್ ಯಶಸ್ವಿಗೊಂಡಿದೆ. ಶಾಲಾ-ಕಾಲೇಜು, ತುರ್ತು ಸೌಲಭ್ಯ ಹೊರತುಪಡಿಸಿ ಬೆಳಿಗ್ಗೆಯಿಂದಲೇ ಅಂಗಡಿ-ಮುಂಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ಜನ ಸಂಚಾರ ವಿರಳವಾಗಿತ್ತು. ಶ್ರೀಕ್ಷೇತ್ರ ಧರ್ಮಸ್ಥಳದ ಕುರಿತು ಅಪಪ್ರಚಾರ ಮಾಡುತ್ತಿರುವವರು ವಿರುದ್ಧ ಭಾರತೀಯ ಜನತಾ ಪಾರ್ಟಿಯ ಬಳ್ಳಾರಿ ನಗರ ಮಂಡಲದಿಂದ ವತಿಯಿಂದ ಪ್ರತಿಭಟನೆ ನಡೆಸಲಾಯಿತು. ಮಾಜಿ ಶಾಸಕ ಜಿ.ಸೋಮಶೇಖರ ರೆಡ್ಡಿ ನೇತೃತ್ವದಲ್ಲಿ ಬಳ್ಳಾರಿ ನಗರದ ಗಡಗಿ ಚೆನ್ನಪ್ಪ ಸರ್ಕಲ್ ಬಳಿ ಸೇರಿದ ಪಕ್ಷದ ಕಾರ್ಯಕರ್ತರು, ಮುಖಂಡರು ದು ರ್ಮಿಗಳ ವಿರುದ್ಧ ಘೋ ಣೆ ಕೂಗಿ ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹಿಸಿದರು. ಗಡಗಿ ಚೆನ್ನಪ್ಪ ವೃತ್ತದಿಂದ ಡಿಸಿ ಕಚೇರಿ ವರೆಗೆ ಮೆರವಣಿಗೆ ಮೂಲಕ ತೆರಳಿದ ಪ್ರತಿಭಟನಾಕಾರರು, ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

*******

ಪರಿಸರ ಸ್ನೇಹಿ ತೈಲ ಉತ್ಪಾದನೆಯಲ್ಲಿ ಭಾರತ ಸ್ವಾವಲಂಬಿಯಾಗುತ್ತಿದ್ದು, ಮುಂದಿನ ದಿನಗಳಲ್ಲಿ ಎಥೆನಾಲ್ ಕಂಪನಿಗಳಿಗೆ ಬೇಡಿಕೆ ಹೆಚ್ಚಲಿದೆ ಎಂದು ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಹಾವೇರಿ ಜಿಲ್ಲೆಯ ನೆಗಳೂರು ಗ್ರಾಮದಲ್ಲಿ ಪ್ರಭೃತಿ ಏಥೇನಾಲ್ ನೂತನ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಎಥೆನಾಲ್ ಕಾರ್ಖಾನೆ ರೈತರಿಗೆ ವರದಾನವಾಗಲಿದೆ. ಈ ಮೊದಲು ಕೃ ಣ್ಣ ನದಿ ತೀರದಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪನೆಯಾಗಿದ್ದರಿಂದ ರೈತರಿಗೆ ಅನುಕೂಲವಾಯಿತು. ಈಗ ಹಾವೇರಿ ಜಿಲ್ಲೆಯ ತುಂಗಭದ್ರಾ, ವರದಾ ನದಿಗಳ ದಂಡೆಯ ಮೇಲೆ ಕಾರ್ಖಾನೆಗಳು ಆರಂಭವಾಗುತ್ತಿದ್ದು, ಇದರಿಂದ ರೈತರಿಗೆ ಸಹಾಯವಾಗಲಿದೆ ಎಂದರು. ಬೇಸಿಗೆಯ ಮೂರ್ನಾಲ್ಕು ತಿಂಗಳು ತುಂಗಭದ್ರಾ ನದಿಯಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗುತ್ತದೆ. ಸಮಸ್ಯೆ ನಿವಾರಣೆ ಉದ್ದೇಶದಿಂದ ವರದಾ ಬೇಡ್ತಿ ನದಿ ಜೋಡಣೆಗೆ ಕೇಂದ್ರ ಸರ್ಕಾರ ತಾತ್ವಿಕ ಒಪ್ಪಿಗೆ ನೀಡಿದೆ. ರಾಜ್ಯ ಸರ್ಕಾರ ಇದನ್ನು ಮುಂದೆ ತೆಗೆದುಕೊಂಡು ಹೋಗಬೇಕು. ಇದರಿಂದ ಸುಮಾರು 18 ಟಿಎಂಸಿ ನೀರು ಲಭ್ಯವಾಗಲಿದ್ದು, ಸಮಸ್ಯೆ ನಿವಾರಣೆಯಾಗಲಿದೆ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

*******

ಸ್ವರಸಾಮ್ರಾಟ ಪಂಡಿತ್ ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಕೊಡ ಮಾಡುವ ಪ್ರಸಕ್ತ ಸಾಲಿನ ಪಂ. ಬಸವರಾಜ ರಾಜಗುರು 'ರಾಷ್ಟ್ರೀಯ ಪ್ರಶಸ್ತಿ'ಗೆ ಪುಣೆಯ ಪಂಡಿತ್ ಸುಹಾಸ ವ್ಯಾಸ ಹಾಗೂ ಯುವ ಪ್ರಶಸ್ತಿಗೆ ಧಾರವಾಡದ ವೀಣಾ ಮಠ ಹಾಗೂ ರಾಯಚೂರಿನ ಚಿದಂಬರ ಜೋಶಿ ಭಾಜನರಾಗಿದ್ದಾರೆ. ನಾಳೆ ಸಂಜೆ ಧಾರವಾಡದ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ, ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ರಾಷ್ಟ್ರೀಯ ಪ್ರಶಸ್ತಿ 1 ಲಕ್ಷ ನಗದು ಮತ್ತು ಸ್ಮರಣಿಕೆ ಹಾಗೂ ಯುವ ಪುರಸ್ಕಾರ ತಲಾ 25 ಸಾವಿರ ನಗದು ಮತ್ತು ಸ್ಮರಣಿಕೆ ಒಳಗೊಂಡಿದೆ.

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಕೊಪ್ಪಳದ ತೋಟಗಾರಿಕೆ ಇಲಾಖೆ ಆವರಣದಲ್ಲಿ 9 ನೇ ವ ’ಣದ ಸಸ್ಯಸಂತೆ ಕಾರ್ಯಕ್ರಮ ನಡೆಯಿತು. 6 ದಿನಗಳ ಕಾಲ ನಡೆದ ಸಂತೆಯಲ್ಲಿ 45 ಲಕ್ಷಕ್ಕೂ ಹೆಚ್ಚಿನ ಸಸಿಗಳ ಹಾಗೂ ವಿವಿಧ ಪರಿಕರಗಳ ಬೇಡಿಕೆಯ ವಹಿವಾಟು ನಡೆಯಿತು. ಕಾರ್ಯಕ್ರಮದ ಆಶಯ ಕುರಿತಂತೆ ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡಿರುವ ರಾಜ್ಯ ವಲಯ ಸಹಾಯಕ ನಿರ್ದೇಶಕ ಮಂಜುನಾಥ ದೊಡ್ಡಪತ್ತಾರ.

ಧ್ವನಿ– ಮಂಜುನಾಥ ದೊಡ್ಡ ಪತ್ತಾರ –28 ಸೆಕೆಂಡ್ಸ್

*******

ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ರಾಜ್ಯದ ವಿವಿಧೆಡೆ ಆರ್ಥಿಕ ಸೇರ್ಪಡೆ ಪರಿಪೂರ್ಣತೆ ಅಭಿಯಾನ ಮುಂದುವರಿದಿದೆ. ಉತ್ತರಕನ್ನಡ ಜಿಲ್ಲೆಯ ಕಾರವಾರ ತಾಲ್ಲೂಕಿನ ಮಾಜಾಳಿ ಗ್ರಾಮ ಪಂಚಾಯಿತಿಯಲ್ಲಿ ನಡೆದ ಕಾರ್ಯಕ್ರಮವನ್ನು ಕೆನರಾ ಬ್ಯಾಂಕ್‌ನ ಪ್ರಾದೇಶಿಕ ವ್ಯವಸ್ಥಾಪಕ ನಾಗರಾಜ ರೆಡ್ಡಿ ಉದ್ಘಾಟಿಸಿ, ಬ್ಯಾಂಕಿನಲ್ಲಿ ಸಿಗುವ ವಿವಿಧ ಯೋಜನೆಗಳ ಬಗ್ಗೆ ತಿಳಿಸಿದರು. ಗದಗ ಜಿಲ್ಲೆಯ ತಿಮ್ಮಾಪೂರ ಗ್ರಾಮದಲ್ಲಿ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನ ಜರುಗಿತು. ಭಾರತೀಯ ಸ್ಟೇಟ್ ಬ್ಯಾಂಕಿನ ಗದಗ ಜಿಲ್ಲಾ ಅಗ್ರಣೀಯ ಬ್ಯಾಂಕ ಆಶ್ರಯದಲ್ಲಿ ನಡೆದ ಕಾರ್ಯಕ್ರಮವನ್ನು ಎಸ್‌ಬಿಐ ವ್ಯವಸ್ಥಾಪಕ ಸಂತೋ ್.ಎಂ.ವ್ಹಿ. ಉದ್ಘಾಟಿಸಿದರು.

*******

ದೇಶದ ಜಿಡಿಪಿಗೆ ಕೊಡುಗೆ ನೀಡುತ್ತಿರುವ ಎಂಎಸ್‌ಎಂಇ ಗಳನ್ನು ಸದೃಢಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿದೆ ಎಂದು ತುಮಕೂರಿನ ಬ್ಯಾಂಕ್ ಆಫ್ ಬರೋಡ ವ್ಯವಹಾರ ಅಭಿವೃದ್ಧಿ ಸಹಾಯಕ ಮುಖ್ಯ ವ್ಯವಸ್ಥಾಪಕ ಸುಮಿತ್ ಕುಮಾರ್ ಮಿಶ್ರಾ ಹೇಳಿದ್ದಾರೆ. ಬ್ಯಾಂಕ್ ಆಫ್ ಬರೋಡಾ ಗ್ರಾಹಕ ಸಂಪರ್ಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆರಂಭಿಸಲು ಉತ್ತೇಜನ ನೀಡುವ ಮೂಲಕ ಉದ್ಯೋಗ ಸೃಷ್ಟಿಸುವ ಕಾರ್ಯಕ್ಕೂ ಆದ್ಯತೆ ನೀಡಲಾಗಿದೆ. ಯೋಜನೆಗಳ ಅನುಷ್ಠಾನಕ್ಕೆ ಪೂರಕವಾಗಿ ಬ್ಯಾಂಕಿಂಗ್ ಕ್ಷೇತ್ರ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

*******

ಗಣೇಶ ಚತುರ್ಥಿ ಹಿನ್ನೆಲೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ–ಬಿಬಿಎಂಪಿ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಪಾಲಿಕೆ ವ್ಯಾಪ್ತಿಯಲ್ಲಿ ಗಣೇಶ ಮೂರ್ತಿ ಪ್ರತಿ ಾ್ಠಪನೆ ಅನುಮತಿ ಪಡೆಯಲು 75 ಏಕಗವಾಕ್ಷಿ ಕೇಂದ್ರಗಳನ್ನು ತೆರೆಯಲಾಗಿದ್ದು, ಗಣೇಶ ಮೂರ್ತಿಗಳ ವಿಸರ್ಜನೆಗಾಗಿ 41 ಕೆರೆ ಅಂಗಳದದಲ್ಲಿ ತಾತ್ಕಾಲಿಕ ಕಲ್ಯಾಣಿಗಳು, 489 ತಾತ್ಕಾಲಿಕ ಸಂಚಾರಿ ವಾಹನಗಳ ವ್ಯವಸ್ಥೆ ಮಾಡಲಾಗುತ್ತಿದೆ. ಗಣೇಶ ವಿಸರ್ಜನೆಗೆ ಸಂಬಂಧಿಸಿದಂತೆ ಮೇಲ್ವಿಚಾರಣೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಈಗಾಗಲೇ ನೋಡಲ್ ಅಧಿಕಾರಿಗಳನ್ನು ಸಹ ನಿಯೋಜಿಸಲಾಗಿದೆ.

*******

ಗೌರಿ ಗಣೇಶ ಹಬ್ಬದ ಹಿನ್ನೆಲೆ, ಪ್ರಯಾಣಿಕರ ಅನುಕೂಲಕ್ಕಾಗಿ ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಹೆಚ್ಚುವರಿ ವಾಹನಗಳ ವ್ಯವಸ್ಥೆ ಮಾಡಿದೆ. ಇದೇ 21 ರಿಂದ 25 ರವರೆಗೆ ನಿಗಮದ ತಾಲ್ಲೂಕು. ಜಿಲ್ಲಾ ಕೇಂದ್ರಗಳಿಂದ ಬೆಂಗಳೂರಿಗೆ ಮತ್ತು ಇತರೆ ಪ್ರಮುಖ ಸ್ಥಳಗಳಿಗೆ ಹಾಗೂ 22, 23, 25 ಮತ್ತು 26 ರಂದು ಬೆಂಗಳೂರಿನಿಂದ ನಿಗಮದ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ 290 ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ನಿಗಮದ ಪ್ರಕಟಣೆ ತಿಳಿಸಿದೆ.

*******

ನವೋದ್ಯಮದ ಬೆಳವಣಿಗೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ವಿವಿಧ ಕಂಪೆನಿಗಳ ಸಹಯೋಗದಲ್ಲಿ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ ಬೆಳಗಾವಿಯ ಸುವರ್ಣ ಸೌಧದಲ್ಲಿ ಹುಬ್ಬಳಿ, ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳ ಉದ್ಯಮದಾರರ ಟೆಕ್ ಕನ್ಸೆಲೆರೇಷನ್–2025 ಆಯೋಜಿಸಿತ್ತು. ಐಟಿಬಿಟಿ ಇಲಾಖೆಯ ನಿರ್ದೇಶಕ ರಾಹುಲ್ ಸಂಕನೂರ ಸೇರಿದಂತೆ ಅನೇಕ ಉದ್ಯಮಿಗಳು ಪಾಲ್ಗೊಂಡಿದ್ದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಮರು ಮಂಡನೆಯಾದ ಕರ್ನಾಟಕ ಸೌಹಾರ್ದ ಸಹಕಾರಿ ತಿದ್ದುಪಡಿ ಮಸೂದೆ 2025 ಗೆ ವಿಧಾನ ಪರಿ ’ತ್ ಅಂಗೀಕಾರ.

ರಾಜ್ಯದಲ್ಲಿಯೇ ಪ್ರಥಮ ಬಾರಿ ಬಾಗಲಕೋಟೆ ಜಿಲ್ಲಾಧಿಕಾರಿ, ಎಸ್‌ಪಿ ಕಚೇರಿಯಲ್ಲಿ ಕಾನೂನು ಸಲಹಾ ಕೇಂದ್ರ ಸ್ಥಾಪನೆ

ಧಾರವಾಡದ ಪಂಡಿತ್ ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಕೊಡಮಾಡುವ ‘ರಾಷ್ಟ್ರೀಯ ಪ್ರಶಸ್ತಿ’ಗೆ ಪುಣೆಯ ಪಂಡಿತ್ ಸುಹಾಸ ವ್ಯಾಸ ಭಾಜನ.

ರಾಜ್ಯದ ವಿವಿಧೆಡೆ ಮುಂದುವರಿದ ಆರ್ಥಿಕ ಸೇರ್ಪಡೆ ಅಭಿಯಾನ: ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಜಾಗೃತಿ

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********